**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಎಸ್.ವ್ಹಿ.ಸಂಕನೂರ, ಶ್ರೀ ಪುಟ್ಟಣ್ಣ, ಹಾಗೂ ಶ್ರೀ ಮರಿತಿಬ್ಬೇಗೌಡ ಇವರು ನಿಯಮ-330ರಡಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ ಒದಗಿಸುವ ಬಗ್ಗೆ.**

**ಪ್ರಶ್ನೆ**

ದಿನಾಂಕ:01.04.2006ರ ನಂತರ ನೇಮಕಗೊಂಡಿರುವ ಸರ್ಕಾರಿ, ಅನುದಾನಿತ ಶಾಲಾ ಕಾಲೇಜುಗಳ ನೌಕರರಿಗೆ ನಿಶ್ಚಿತ ಪಿಂಚಣಿ ಸೌಲಭ್ಯ ಕಲ್ಪಿಸದೇ ಇರುವುದು ಹಾಗೂ ಜ್ಯೋತಿ ಸಂಜೀವಿನಿ ಸೌಲಭ್ಯ ವಿಸ್ತರಿಸದೇ ಇರುವ ಕುರಿತು.

**ಉತ್ತರ**

ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ 2006 ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ: 01/04/2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ (NPS) ವ್ಯಾಪ್ತಿಗೆ ಒಳಪಡುತ್ತಾರೆ.

ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಸರ್ಕಾರದ ಆದೇಶ ಸಂಖ್ಯೆ:FD (SPL)04 PET 2005, ದಿನಾಂಕ: 31.03.2006ರ ಕ್ರಮ ಸಂಖ್ಯೆ: 08ರಲ್ಲಿ ಈ ಕೆಳಗಿನಂತೆ ತಿಳಿಸಲಾಗಿದೆ.

*...(8) ಸಹಾಯಾನುದಾನ ಶಿಕ್ಷಣ ಸಂಸ್ಥೆಗಳ ನೌಕರರಿಗೆ, ಗೊತ್ತು ಮಾಡಿದ ಪ್ರಯೋಜನ ಪಿಂಚಣಿಯನ್ನು ದಿನಾಂಕ:01.04.2006 ರಂದು ಅಥವಾ ಅದರ ತರುವಾಯ ಸೇರುವ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನಿಲ್ಲಿಸಿ ಬಿಡತಕ್ಕದ್ದು. ನೂತನ ನಿಗದಿತ ವಂತಿಗೆ ಪಿಂಚಣಿ ಯೋಜನೆಯು, ಆಯ್ಕೆಯ ಅವಕಾಶದ ಆಧಾರದ ಮೇಲೆ ನೌಕರನಿಗೆ ಮತ್ತು ನಿಯೋಜಕನಿಗೆ ಅನ್ವಯವಾಗತಕ್ಕದ್ದು ಮತ್ತು ಆಯ್ಕೆಯ ಅವಕಾಶವನ್ನು ಇಬ್ಬರಿಂದಲೂ ಚಲಾಯಿಸತಕ್ಕುದು. ಆದರೆ, ನಿಯೋಜಕರ ವಂತಿಗೆಯನ್ನು ಸಂಬಂಧಪಟ್ಟ ಸಂಸ್ಥೆಗಳು ಭರಿಸತಕ್ಕುದು. ಆದರೆ ರಾಜ್ಯ ಸರ್ಕಾರವಲ್ಲ.*

ಈ ಆದೇಶವು ದಿನಾಂಕ: 01/04/2006ರಿಂದ ಜಾರಿಗೆ ಬಂದಿದ್ದು, ದಿನಾಂಕ: 01/04/2006ರ ನಂತರ ಅನುದಾನಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲೆ/ ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಈ ಮೇಲಿನ ನಿಯಮ ಅನ್ವಯವಾಗುತ್ತದೆ.

ಅನುದಾನಿತ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ ದಿನಾಂಕ:01.04.2006 ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ: 01/04/2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ (NPS) ವ್ಯಾಪ್ತಿಗೆ ಒಳಪಡುತ್ತಾರೆ.

ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescrition of Curricula) ನಿಯಮಗಳು-1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.

ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ. ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ -ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯ ನೀಡಲು ಅವಕಾಶವಿರುವುದಿಲ್ಲ. ಆದುದರಿಂದ ಅನುದಾನಿತ ಸಿಬ್ಬಂದಿಗಳು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಬರುವುದಿಲ್ಲ.

**ಸಂಖ್ಯೆ:ಇಪಿ 648 ಎಸ್‌ಇಎಸ್ 2022**

**(ಬಿ.ಸಿ ನಾಗೇಶ್)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
ಹಾಗೂ ಸಕಾಲ ಸಚಿವರು